ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉನಿ : ಸುಮಪ : 2018–19 : ದಿನಾಂಕ : 25–10–2018

# ಪತ್ರಿಕಾ ಆಮಂತ್ರಣ

1. ಕನ್ನಡ ಪುಸ್ತಕ ಪ್ರಾಧಿಕಾರ ವತಿಯಿಂದ " ನಿಮ್ಮ ಮನೆಗೆ ನಮ್ಮ ಪುಸ್ತಕ "

ಅತಿಥಿಗಳು:

ಎಂ. ಸೋಮಶೇಖರ್, ಮುಖ್ಯ ಅಧೀಕ್ಷಕರು, ಕೇಂದ್ರ ಕಾರಾಗೃಹ, ಬೆಂಗಳೂರು
ಪಿ.ಎಸ್. ರಮೇಶ್, ಅಧೀಕ್ಷಕರು, ಕೇಂದ್ರ ಕಾರಾಗೃಹ, ಬೆಂಗಳೂರು.

ನಮ್ಮೊಂದಿಗೆ:

ಡಾ. ದೊಡ್ಡರಂಗೇಗೌಡ
ಡಾ. ಸಿ.ಆರ್. ಚಂದ್ರಶೇಖರ್
ಡಾ. ಸಿದ್ಧಲಿಂಗಯ್ಯ

ಪುಸ್ತಕಗಳೊಂದಿಗೆ:
ಡಾ. ವಸುಂಧರಾ ಭೂಪತಿ, ಅಧ್ಯಕ್ಷರು, ಕನ್ನಡ ಪುಸ್ತಕ ಪ್ರಾಧಿಕಾರ.

ದಿನಾಂಕ: 26–10–2018, ಶುಕ್ರವಾರ, ಸಮಯ : ಬೆಳಿಗ್ಗೆ 11–00 ಗಂಟೆಗೆ

ಸ್ಥಳ: ಕೇಂದ್ರ ಕಾರಾಗೃಹದ ಆವರಣ, ಪರಪ್ಪನ ಅಗ್ರಹಾರ, ಬೆಂಗಳೂರು.

2. Farewell address to Mr. Justice A.S. Bopanna,
Chief justice designate Gauhati High Court.

Farewell Address by:
The Chairman, Karnataka State Bar Council, Bengaluru

Date: 26-10-2018, Friday at 2.00 p.m.
Venue: Court Hall No. 1, Principal Bench of the
High Court of Karnataka, Bengaluru.

# ಪತ್ರಿಕಾ ಪ್ರಕಟಣೆ

**ಸಂಖ್ಯೆ:1181/1281**

## ಕೋಳಿ ಸಾಕಾಣಿಕೆ ತರಬೇತಿ

ಬೆಂಗಳೂರು, ಅಕ್ಟೋಬರ್ 25 (ಕರ್ನಾಟಕ ವಾರ್ತೆ) :

ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ರಾಜ್ಯ ಕುಕ್ಕುಟ ಕ್ಷೇತ್ರದ ವತಿಯಿಂದ ಒಂದು ದಿನದ "ಕೋಳಿ ಸಾಕಾಣಿಕೆ ತರಬೇತಿ" ತರಬೇತಿಯನ್ನು ಹಮ್ಮಿಕೊಳ್ಳಲಾಗಿದೆ.

ನಗರದ ಹೆಸರಘಟ್ಟದಲ್ಲಿರುವ ಸಂಸ್ಥೆಯ ಆವರಣದಲ್ಲಿ ನವೆಂಬರ್ 3 ಮತ್ತು 17 ರಂದು ಬೆಳಿಗ್ಗೆ 9–00 ರಿಂದ ಸಂಜೆ 5–00 ಗಂಟೆಯವರೆಗೆ ತರಬೇತಿ ನಡೆಯಲಿದ್ದು, ಆಸಕ್ತರು "ahvstrg.22.org" ವೆಬ್‌ಸೈಟ್‌ನಲ್ಲಿ ಆನ್‌ಲೈನ್ ಮೂಲಕ ನೋಂದಣಿ ಮಾಡಿಕೊಳ್ಳಬಹುದಾಗಿದೆ.

ತರಬೇತಿಯನ್ನು ಉಚಿತವಾಗಿ ನೀಡಲಾಗುವುದು. ತರಬೇತಿಯಲ್ಲಿ ಭಾಗವಹಿಸುವವರಿಗೆ ಯಾವುದೇ ಭತ್ಯೆ ನೀಡಲಾಗುವುದಿಲ್ಲ. ಲಭ್ಯವಿರುವ ಮೂಲಭೂತ ಸೌಕರ್ಯಗಳನ್ನು ಆಧರಿಸಿ ಪ್ರಸ್ತುತ ತರಬೇತಿಯ ನೋಂದಣಿಯನ್ನು 75 ಜನರಿಗೆ ಮಾತ್ರ ಸೀಮಿತಗೊಳಿಸಿದ್ದು, ಮೊದಲು ನೋಂದಾಯಿಸಿದವರಿಗೆ ಮೊದಲ ಆದ್ಯತೆ ನೀಡಲಾಗುವುದು.

ತರಬೇತಿಯಲ್ಲಿ ಪಾಲ್ಗೊಳ್ಳಲಿರುವವರು ನೋಂದಾವಣೆಯ ಸಮಯದಲ್ಲಿ ಆಧಾರ್ ಕಾರ್ಡ್‌ನ ಒಂದು ಪ್ರತಿ ಮತ್ತು ಇತ್ತೀಚಿನ 2 ಪಾಸ್‌ಪೋರ್ಟ್ ಅಳತೆಯ ಭಾವಚಿತ್ರಗಳನ್ನು ನೀಡಬೇಕು. ತರಬೇತಿಯು ವಿದ್ಯಾರ್ಥಿ ನಿಲಯ, ರಾಜ್ಯ ಕುಕ್ಕುಟ ಕ್ಷೇತ್ರ, ಹೆಸರಘಟ್ಟ, ಬೆಂಗಳೂರು – 560 089 ( ಐ.ಐ.ಹೆಚ್.ಆರ್ ನಿಂದ ಸುಮಾರು 1 ಕಿ.ಮಿ. ದೂರದಲ್ಲಿ ) ಮೀನುಗಾರಿಕೆ ಸಂಸ್ಥೆಯ ಎದುರು ಇಲ್ಲಿ ನಡೆಯಲಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದ್ದಾರೆ.

**ಸಂಖ್ಯೆ:1182/1282**

# ಪ್ರಾದೇಶಿಕ ಸಾರಿಗೆ ಪ್ರಾಧಿಕಾರದ ಸಭೆ

ಬೆಂಗಳೂರು, ಅಕ್ಟೋಬರ್ 25 (ಕರ್ನಾಟಕ ವಾರ್ತೆ) :

ಅಕ್ಟೋಬರ್ 29 ರಂದು ಅಪರಾಹ್ನ 12–00 ಗಂಟೆಗೆ ಪ್ರಾದೇಶಿಕ ಸಾರಿಗೆ ಪ್ರಾಧಿಕಾರದ ಸಭೆಯನ್ನು ಬೆಂಗಳೂರು ಜಿಲ್ಲಾಧಿಕಾರಿಗಳು ಬೆಂಗಳೂರು ನಗರ ಜಿಲ್ಲೆ, ಕಂದಾಯ ಭವನ, ಕೆಂಪೇಗೌಡ ರಸ್ತೆ, ಬೆಂಗಳೂರು ಇಲ್ಲಿ ಏರ್ಪಡಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# Regional Transport Authority Meeting

Bengaluru, October, 25(Karnataka Information)

Regional Transport Authority, Bengaluru (Urban) meeting is schedule to be held on October 29, 2018 12.00 A.M. at Kandaya Bhavana, Office of the Deputy Commissioner(Urban)Bengaluru.

# ಅವಧಿ ವಿಸ್ತರಣೆ

ಬೆಂಗಳೂರು, ಅಕ್ಟೋಬರ್ 25 (ಕರ್ನಾಟಕ ವಾರ್ತೆ) :

2019ನೇ ಮಾರ್ಚ್/ಏಪ್ರಿಲ್ ಮಾಹೆಯಲ್ಲಿ ನಡೆಯುವ ಎಸ್.ಎಸ್.ಎಲ್.ಸಿ. ಪರೀಕ್ಷೆಗೆ ರಾಜ್ಯದ ಸರ್ಕಾರಿ ಮತ್ತು ಸರ್ಕಾರದಿಂದ ಮಾನ್ಯತೆ ಪಡೆದ ಅನುದಾನಿತ, ಅನುದಾನರಹಿತ ಶಾಲಾ/ ಕಾಲೇಜುಗಳ ಮೂಲಕ ಅರ್ಹ ವಿದ್ಯಾರ್ಥಿಗಳ ನೋಂದಣಿಗೆ ಸಂಬಂಧಪಟ್ಟಂತೆ ಅರ್ಹ ಖಾಸಗಿ ಅಭ್ಯರ್ಥಿಗಳ ನೊಂದಣಿ ಮತ್ತು ಶಾಲಾ ಸಂಕೇತ ಪಡೆಯಲು ದಿನಾಂಕ:29.10.2018ವರೆಗೆ ಮತ್ತು ಅರ್ಹ ಶಾಲಾ ಅಭ್ಯರ್ಥಿಗಳ, ಖಾಸಗಿ ಅಭ್ಯರ್ಥಿಗಳ ಹಾಗೂ ಪುನರಾವರ್ತಿತ ಅಭ್ಯರ್ಥಿಗಳ ವಿವರಗಳನ್ನು ಅನ್‌ಲೈನ್ (SATS) ಮೂಲಕ ಅಪ್‌ಲೋಡ್ ಮಾಡಲು ದಿನಾಂಕ:31.10.2018ರವರೆಗೆ ವಿಸ್ತರಿಸಲಾಗಿದೆ. ದಿನಾಂಕ:31.10.2018ರೊಳಗೆ SATS ಜಾಲತಾಣವನ್ನು FREEZE ಮಾಡಲಾಗುತ್ತದೆ. ಆದ್ದರಿಂದ ತಪ್ಪದೆ ಎಲ್ಲಾ ಅರ್ಹ ವಿದ್ಯಾರ್ಥಿಗಳ ವಿವರಗಳನ್ನು SATS ಜಾಲತಾಣದಲ್ಲಿ

ದಿನಾಂಕ:31.10.2018ರೊಳಗಾಗಿ ಅಪ್‌ಲೋಡ್ ಮಾಡಲು ಎಲ್ಲಾ ಮುಖ್ಯ ಶಿಕ್ಷಕರುಗಳಿಗೆ ತಿಳಿಸಿದೆ.